ಅಧ್ಯಕ್ಷರು: Ok. ಇದನ್ನು ಮಾಡುವ ಅವಶ್ಯಕತೆ ಇದೆ.

ಶ್ರೀ ಬಸವರಾಜ್ ಎಸ್. ಬೊಮ್ಮಾಯಿ: ಆದ್ದರಿಂದಲೇ ಹಗಲು ಕಂಡ ಬಾವಿಗೆ ರಾತ್ರಿ ಬೀಳಬೇಡಿ ಎಂದು ಹೇಳುತ್ತಿದ್ದೇನೆ.

ನರ್ಮ ಯೋಜನೆಯಡಿ ಕೈಗೊಳ್ಳಲಾಗಿರುವ ಕಾಮಗಾರಿಗಳು

13 (91); ಶ್ರೀ ಅಖಂಡ ಶ್ರೀನಿವಾಸಮೂರ್ತಿ .ಆರ್.

ಅ) 2014–15ನೇ ಸಾಲಿನಲ್ಲಿ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿನ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೆ ನರ್ಮ್ ಯೋಜನೆಯಡಿಯಲ್ಲಿ ಬಿಡುಗಡೆ ಆದ ಅನುದಾನವೆಷ್ಟು (ಮಾಹಿತಿ ನೀಡುವುದು);

ಆ) ಈ ಯೋಜನೆಯ ಅನುದಾನವನ್ನು ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ಎಲ್ಲಾ ವಿಧಾನಸಭಾ ಕ್ಷೇತ್ರಕ್ಕೂ ನೀಡಲಾಗಿದೆಯೇ;

ಇ) ಹಾಗಿದ್ದಲ್ಲಿ, ಈ ಯೋಜನೆಯ ಅನುದಾನದಡಿ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಖರ್ಚು ಮಾಡಿದ ಮೊತ್ತವೆಷ್ಟು; ಕೈಗೊಳ್ಳಲಾಗಿರುವ ಹಾಗೂ ಬಾಕಿ ಉಳಿದಿರುವ ಕಾಮಗಾರಿಗಳಾವುವು (ಅಂಕಿ ಅಂಶಗಳ ಮಾಹಿತಿ ನೀಡುವುದು);

ಈ) ಪುಲಕೇಶಿನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಈ ಯೋಜನೆಯಡಿ ಕಾಮಗಾರಿಗಳನ್ನು ಕೈಗೊಳ್ಳಲು ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ಈ ಯೋಜನೆಯಡಿ ಕೈಗೊಳ್ಳಬೇಕಾದ ಕಾಮಗಾರಿಗಳಿಗೆ ಮಂಜೂರಾತಿ ನೀಡಲು ಸರ್ಕಾರ ವಿಳಂಬ ಮಾಡಲು ಕಾರಣವೇನು?

ಶ್ರೀ ಮಾನ್ಯ ಸಿದ್ದರಾಮಯ್ಯ (ಮುಖ್ಯ ಮಂತ್ರಿಗಳು)

ಅ) 2014–15ನೇ ಸಾಲಿನಲ್ಲಿ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಜೆಎನ್‌ನರ್ಮ್ ಸ್ಥಿತ್ಯಂತರ ಹಂತದಡಿಯಲ್ಲಿ 2 ಯೋಜನೆಗೆ ₹. 17.18

ಕೋಟಿ ಬಿಡುಗಡೆಯಾಗಿದ್ದು, ಅದರಲ್ಲಿ ₹. 12.03 ಕೋಟಿ ಕೇಂದ್ರ ಸರ್ಕಾರದ ಅನುದಾನ ಮತ್ತು ₹. 5.15 ಕೋಟಿ ರಾಜ್ಯ ಸರ್ಕಾರದ ಅನುದಾನವಾಗಿದೆ.

ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

ಆ) ಅನುದಾನವನ್ನು ಅನುಮೋದನೆಯಾದ ಯೋಜನೆಗಳಿಗೆ ಬಿಡುಗಡೆ ಮಾಡಲಾಗುವುದು. ವಿಧಾನ ಸಭಾ ಕ್ಷೇತ್ರವಾರು ಬಿಡುಗಡೆ ಮಾಡಲಾಗುವುದಿಲ್ಲ.

ಇ) ಜೆ.ಎನ್.ನರ್ಮ್ ಸ್ಥಿತ್ಯಂತರ ಹಂತದ ನಗರ ಮೂಲಸೌಕರ್ಯ ಮತ್ತು ಆಡಳಿತ (UIG) ಉಪ ಅಭಿಯಾನದಡಿಯಲ್ಲಿ 2 ಯೋಜನೆಗಳನ್ನು ಕೈಗೊಳ್ಳಲಾಗಿದೆ.

ಯೋಜನೆಗಳ ಆರ್ಥಿಕ ಹಾಗೂ ಭೌತಿಕ ಪ್ರಗತಿ ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.

ಈ) ಪುಲಕೇಶಿನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಈ ಯೋಜನೆಯಡಿ ಕಾಮಗಾರಿಗಳನ್ನು ಕೈಗೊಳ್ಳಲು ಯಾವುದೇ ಪ್ರಸ್ತಾವನೆ ಸಲ್ಲಿಸಿರುವುದಿಲ್ಲ.

ಉ) ಈ ಯೋಜನೆಯಡಿ ಪುಲಕೇಶಿನಗರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಯಾವುದೇ ಕಾಮಗಾರಿ ಪ್ರಸ್ತಾವನೆ ಇಲ್ಲದಿರುವುದರಿಂದ ವಿಳಂಬದ ಪ್ರಶ್ನೆ ಉದ್ಭವಿಸುವುದಿಲ್ಲ.

ANNEXURE-I

(in Rs. Crores)

Sl. No.	Name of DPRs	Approved Cost	GoI Share	GoK Share	ULB Share	Date of Approval	Funds Released till date			Status
							GoI Share	GoK Share	Total GoI + GoK	
1	Bulk Flow Metering and Monitoring Systems for Bangalore Water Supply System.	34.79	12.18	5.22	17.40	17.12.2013, 129th CSMC Meeting	3.04	1.30	4.34	Call 2 tender has been invited.
2	Rehabilitation of Water Treatment Plant of CWSS Stage I and II at T.K. Halli, Bangalore.	102.71	35.95	15.41	51.36	17.12.2013, 129th CSMC Meeting	8.99	3.85	12.84	Tender invited, to be placed before Board for approval for award of contract to L1.
	TOTAL UIG FOR BANGALORE	**137.50**	**48.13**	**20.63**	**68.75**		**12.03**	**5.15**	**17.18**	

ಶ್ರೀ ಆರ್. ಅಖಂಡ ಶ್ರೀನಿವಾಸಮೂರ್ತಿ: ಮಾನ್ಯ ಅಧ್ಯಕ್ಷರೆ, ನರ್ಮ್ ಯೋಜನೆಯಲ್ಲಿ ಜಾರಿಯಲ್ಲಿರುವ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಿಧಾನ ಸಭಾ ಕ್ಷೇತ್ರಕ್ಕೆ ಎಷ್ಟೆಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಹಾಗೂ ನನ್ನ ಕ್ಷೇತ್ರವಾದಂಥ ಪುಲಿಕೇಶಿನಗರ ವಿಧಾನಸಭಾ ಕ್ಷೇತ್ರ ಮೀಸಲು ಕ್ಷೇತ್ರವಾಗಿದ್ದು, ಇಲ್ಲಿ ಅಲ್ಪಸಂಖ್ಯಾತರು ಹಾಗೂ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಜನರು ಹೆಚ್ಚಾಗಿದ್ದು, ಅಲ್ಲಿ ಮೂಲಭೂತ ಸೌಕರ್ಯದ ಕೊರತೆ ಹೆಚ್ಚಾಗಿರುವುದರಿಂದ ಈ ಯೋಜನೆಯಲ್ಲಿ ನನ್ನ ಕ್ಷೇತ್ರಕ್ಕೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಲಾಗಿದೆಯೇ ಎಂಬುದು ನನ್ನ ಪ್ರಶ್ನೆಯಾಗಿದೆ.

ಶ್ರೀ ಸಿದ್ದರಾಮಯ್ಯ: ಮಾನ್ಯ ಅಧ್ಯಕ್ಷರೆ, ನರ್ಮ್ ಯೋಜನೆಯಲ್ಲಿ ಈ ಸಾರಿ ಹಣ ಬರುವುದಿಲ್ಲ. ಬಹುಶಃ ಅದನ್ನು ಕೇಂದ್ರ ಸರ್ಕಾರದವರು ನಿಲ್ಲಿಸುತ್ತಾರೆಂದು ಕಾಣುತ್ತದೆ. ಈಗ ನರ್ಮ್ ಯೋಜನೆ ಬಗ್ಗೆ ಕೇಂದ್ರದವರು ಏನನ್ನು ಸಹ ಹೇಳಿಲ್ಲ. ಈಗ ಸ್ಮಾರ್ಟ್ ಸಿಟಿ ಮಾಡುತ್ತೇವೆಂದು ಹೊರಟಿದ್ದಾರೆ. ಆದರೆ ಸ್ಮಾರ್ಟ್ ಸಿಟಿ ಮಾಡುತ್ತಾರೋ ಅಥವಾ ಇಲ್ಲವೋ ಎಂಬುದು ಗೊತ್ತಿಲ್ಲ. ಆದರೆ ನರ್ಮ್ ಯೋಜನೆಗೆ ಮಾತ್ರ ಯಾವುದೇ ಹಣವನ್ನು ಬಿಡುಗಡೆ ಮಾಡಿಲ್ಲ.

ಶ್ರೀ ಜಗದೀಶ್ ಶೆಟ್ಟರ್: ಸನ್ಮಾನ್ಯ ಅಧ್ಯಕ್ಷರೆ, ಸ್ಮಾರ್ಟ್ ಸಿಟಿ ಎಂದು ಈಗ ಹೊಸದಾಗಿ ತೆಗೆದುಕೊಂಡಿದ್ದಾರೆ. ಅದಕ್ಕೆ ಈಗ ಗೈಡ್‌ಲೈನ್ಸ್ ಅನ್ನು ನಿಗದಿ ಮಾಡುತ್ತಿದ್ದಾರೆ.

ಶ್ರೀ ಸಿದ್ದರಾಮಯ್ಯ: ಮಾನ್ಯ ಜಗದೀಶ್ ಶೆಟ್ಟರ್‌ರವರೇ, ನಾನು ಸಹ ಅದೇ ವಿಷಯವನ್ನು ಹೇಳಿದ್ದೇನೆ. ಸ್ಮಾರ್ಟ್ ಸಿಟಿ ಮಾಡಿದ್ದೇವೆಂದು ನರ್ಮ್ ಯೋಜನೆಗೆ 2014–15ನೇ ಸಾಲಿನಲ್ಲಿ ಹಣ ಬಿಡುಗಡೆ ಮಾಡುತ್ತಿಲ್ಲ. ಆದ್ದರಿಂದ, ಕೇಂದ್ರ ಸರ್ಕಾರದವರು ಏನು ಮಾಡುತ್ತಾರೆಂಬುದನ್ನು ನೋಡೋಣ. ಅಲ್ಲಿಂದ ಹಣ ಬಂದರೆ ಅವರ ಕ್ಷೇತ್ರಕ್ಕೆ ಮಾಡಿಕೊಡುತ್ತೇವೆ.

ಅಧ್ಯಕ್ಷರು: Ok.